ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕೋವಿಡ್ ನಿಯಂತ್ರಣಕ್ಕಾಗಿ ಸರ್ಕಾರ ತರಿಸಿದ ಪಿ.ಪಿ.ಇ. ಕಿಟ್‌ಗಳ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು) :-

840 (875) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್ ನಿಯಂತ್ರಣಕ್ಕಾಗಿ ಪಿ.ಪಿ.ಇ. ಕಿಟ್ ಗಳನ್ನು ಎಲ್ಲಿಂದ ತರಿಸಲಾಗಿದೆ; (ಸೂಕ್ತ ಅಂಕಿ ಅಂಶಗಳೊಂದಿಗೆ ಮಾಹಿತಿ ನೀಡುವುದು)

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೇಂದ್ರದ ಕೋವಿಡ್ ನಿಯಂತ್ರಣ ಕೇಂದ್ರಕ್ಕೆ ಎಷ್ಟು ಪಿ.ಪಿ.ಇ. ಕಿಟ್‌ಗಳು ಹಾಗೂ ಉಳಿದ ಆಸ್ಪತ್ರೆಗಳಿಗೆ ಎಷ್ಟು ಹಂಚಿಕೆಯಾಗಿವೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರ ವಿತರಣೆ ಮಾಡಿದ ಪಿ.ಪಿ.ಇ. ಕಿಟ್‌ಗಳನ್ನೇ ಖಾಸಗಿ ಆಸ್ಪತ್ರೆಗಳು ಹೆಚ್ಚು ದರದಲ್ಲಿ ಕೋವಿಡ್ ರೋಗಿಗಳ ಸೇವೆಗೆ ಬಳಕೆ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ;

(ಈ) ಈವರೆಗೆ ಬಳಕೆಯಾದ ಪಿ.ಪಿ.ಇ. ಕಿಟ್ ಗಳು ಮತ್ತು ಅದಕ್ಕೆ ಸಂಬಂಧಿಸಿದ ಮಾಹಿತಿಗಳನ್ನು ಸರ್ಕಾರ ಬಹಿರಂಗ ಪಡಿಸುವುದೇ? (ಜಿಲ್ಲಾವಾರು ಮಾಹಿತಿ ನೀಡುವುದು)